# ಜೆಎಸ್‌ಎಸ್ ಮಹಾವಿದ್ಯಾಪೀಠ
## ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–281

## 25 ಸೆಪ್ಟಂಬರ್ 2021 * ಶನಿವಾರ * ಸಂಜೆ 6.00

## ಡಿಜಿಟಲ್ ಕಾರ್ಯಕ್ರಮ

### ದಿವ್ಯ ಸಾನ್ನಿಧ್ಯ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ

ಸುತ್ತೂರು ಶ್ರೀಕ್ಷೇತ್ರ

### ಉಪನ್ಯಾಸ



**ಶ್ರೀ ಕೆ.ಬಿ. ಸಿದ್ಧಲಿಂಗಪ್ಪ**

ನಿವೃತ್ತ ಕಲಾ ಶಿಕ್ಷಕರು

ಅಧ್ಯಕ್ಷರು, ಅಖಿಲಭಾರತ ಶರಣ ಸಾಹಿತ್ಯ ಪರಿಷತ್ತು, ಬಳ್ಳಾರಿ ಜಿಲ್ಲಾ ಘಟಕ

**ವಿಷಯ: ಶರಣರ ನಡೆನುಡಿ ಸಿದ್ಧಾಂತ**

(ಉಪನ್ಯಾಸದ ನಂತರ ಆನ್‌ಲೈನ್‌ನಲ್ಲಿ ಬರುವ ಪ್ರಶ್ನೆಗಳಲ್ಲಿ ಆಯ್ದವುಗಳಿಗೆ ಉತ್ತರಿಸಲಾಗುವುದು)

**ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ**

LIVE STREAMING

YouTube http://Youtube.com/c/JSSMahavidyapeethaonline

https://www.facebook.com/JSSMVP

ಶ್ರೀಮತ್ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದ ನಿಲಯಗಳು ಹಾಗೂ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ವ್ಯಕ್ತಿಗಳ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆ ಪ್ರಸಾರಕ್ಕಾಗಿ ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಹಲವಾರು ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ನಡೆಸುತ್ತಿದ್ದರು. 1986 ರಲ್ಲಿ ಶರಣ ಸಾಹಿತ್ಯ ಪರಿಷತ್ ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳನ್ನು ಸ್ಥಾಪಿಸಿ ಅದಕ್ಕೊಂದು ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ದಿನಾಂಕ 12.5.1996 ರಂದು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನ ಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಕೆ.ಬಿ. ಸಿದ್ಧಲಿಂಗಪ್ಪನವರು** ನಿವೃತ್ತ ಕಲಾ ಶಿಕ್ಷಕರು. ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ಜನ್ಮಸ್ಥಳ. ತುಮಕೂರು ಶ್ರೀ ಸಿದ್ಧಗಂಗಾ ಮಠದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ. ಹರಪನಹಳ್ಳಿಯಲ್ಲಿ ಪದವಿಪೂರ್ವ, ಗದಗಿನ ವಿಜಯ ಕಲಾಮಂದಿರದಲ್ಲಿ ಚಿತ್ರಕಲಾ ಪದವಿ, ಕರ್ನಾಟಕ ವಿಶ್ವವಿದ್ಯಾಲಯದಿಂದ ಕನ್ನಡ ವಿಷಯದಲ್ಲಿ ಸ್ನಾತಕೋತ್ತರ ಪದವಿ ಹಾಗೂ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಿಂದ ಬಿ.ಇಡಿ, ಎಂ.ಇಡಿ ಹಾಗೂ ಪತ್ರಿಕೋದ್ಯಮ ಡಿಪ್ಲೊಮಾ ಮತ್ತು ರಾಮಕೃಷ್ಣ ಆಶ್ರಮದಿಂದ ನೈತಿಕ ಮತ್ತು ಆಧ್ಯಾತ್ಮಿಕ ಡಿಪ್ಲೊಮಾಗಳನ್ನು ಪಡೆದಿದ್ದಾರೆ.

ಪ್ರಸ್ತುತ ಬಳ್ಳಾರಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಉತ್ತಮ ವಾಗ್ಮಿಗಳು ಹಾಗೂ ಬರಹಗಾರರೂ ಆಗಿರುವ ಸಿದ್ಧಲಿಂಗಪ್ಪನವರು, ಶರಣರ ಜೀವನದ ಕುರಿತ 'ಜೇಬು' ಕೃತಿ ಸೇರಿದಂತೆ 5ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದಾರೆ.

ರಾಷ್ಟ್ರಪತಿ ಸೇವಾ ಪ್ರಶಸ್ತಿ ಸೇರಿದಂತೆ ಹಲವಾರ ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.